ಬೆಂಗಳೂರು ನಗರದಲ್ಲಿ ಡೆಂಗ್ಯೂ ಜ್ವರ ತಡೆಗಟ್ಟುವುದು

187(154); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ್)

ಅ) 2013ನೇ ಜನವರಿಯಿಂದ ಇಲ್ಲಿಯವರೆಗೆ ಬೆಂಗಳೂರು ನಗರದಲ್ಲಿ ಡೆಂಗ್ಯೂ ಜ್ವರದಿಂದ ಸಾವನ್ನಪ್ಪಿದವರ ಸಂಖ್ಯೆ ಎಷ್ಟು?

ಆ) ಹಾಗಿದ್ದಲ್ಲಿ, ಬೆಂಗಳೂರು ನಗರದಲ್ಲಿ ಡೆಂಗ್ಯೂ ಜ್ವರದ ಸೋಂಕು ಕಾಣಿಸಿಕೊಳ್ಳಲು ಕಾರಣಗಳೇನು?

ಇ) ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) 2013ನೇ ಸಾಲಿನ ಜನವರಿಯಿಂದ 21–06–2014 ರವರೆಗೆ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಡೆಂಗಿ ಜ್ವರದಿಂದ ಯಾವುದೇ ದೃಢೀಕೃತ ಮರಣ ಪ್ರಕರಣಗಳು ವರದಿಯಾಗಿರುವುದಿಲ್ಲ.

ಆ) ಡೆಂಗಿ ಜ್ವರವು ವೈರಾಣುಗಳಿಂದ ಉಂಟಾಗುತ್ತದೆ. ಈ ವೈರಾಣುಗಳು ಈಡೀಸ್ ಸೊಳ್ಳೆಗಳಿಂದ ಒಬ್ಬರಿಂದೊಬ್ಬರಿಗೆ ಹರಡುತ್ತದೆ. ಈ ಸೊಳ್ಳೆಗಳು ತೆರೆದ ನೀರಿನ ಶೇಖರಣೆಗಳಲ್ಲಿ ಹಾಗೂ ಮನೆಯ ಹೊರಾಂಗಣ ಪರಿಸರದಲ್ಲಿನ ಘನ ತ್ಯಾಜ್ಯ ವಸ್ತುಗಳಲ್ಲಿ ಶೇಖರಣೆಯಾಗುವ ಮಳೆ ನೀರಿನ ಸಂಗ್ರಹಗಳಲ್ಲಿ ಉತ್ಪತ್ತಿಯಾಗುತ್ತವೆ.

ಇ) ಸರ್ಕಾರ ಕೈಗೊಂಡಿರುವ ಕ್ರಮಗಳನ್ನು ಅನುಬಂಧದಲ್ಲಿ ನೀಡಲಾಗಿದೆ

ಅನುಬಂಧ

ರಾಜ್ಯದಲ್ಲಿ ಡೆಂಗಿ ಜ್ವರ ನಿಯಂತ್ರಣಕ್ಕಾಗಿ ಸರ್ಕಾರ ಕೈಗೊಂಡ ಕ್ರಮಗಳ ವಿವರಗಳು ಹೀಗಿವೆ:

ಬಿಬಿಎಂಪಿ ವ್ಯಾಪ್ತಿಯಲ್ಲಿ:– ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಡೆಂಗಿ ಜ್ವರರೋಗ ನಿಯಂತ್ರಣಕ್ಕಾಗಿ ಹೊರಾಂಗಣ ಪರಿಸರದ ತ್ಯಾಜ್ಯ ವಸ್ತುಗಳಾದ ಹಳೆಯ ಟೈರ್‌ಗಳು, ಪ್ಲಾಸ್ಟಿಕ್ ಪದಾರ್ಥಗಳು

ಮುಂತಾದುವುಗಳನ್ನು ವಿಲೇವಾರಿ ಮಾಡಲು ಮತ್ತು ಓವರ್ ಹೆಡ್ ಟ್ಯಾಂಕ್‌ಗಳ ಪರಿಶೀಲನೆ ಮಾಡಲು ಹಾಗೂ ಮನೆ ಮನೆಗೆ ಭೇಟಿ ನೀಡಿ ಡೆಂಗಿ ರೋಗದ ಬಗ್ಗೆ ಮಾಹಿತಿ ಪಡೆದು ಈಡೀಸ್ ಲಾರ್ವಾ ಸರ್ವೆ ಕೈಗೊಂಡು ಸೂಕ್ತ ಸಲಹೆ ನೀಡಲಾಗುತ್ತಿದೆ.

1. ಬಿ.ಬಿ.ಎಂ.ಪಿ ವ್ಯಾಪ್ತಿಯ ವಿಧಾನ ಸಭಾ ಕ್ಷೇತ್ರವಾರು ಸಂಬಂಧಪಟ್ಟ ಆರೋಗ್ಯ ವೈದ್ಯಾಧಿಕಾರಿ, ಉಪ ಆರೋಗ್ಯಾಧಿಕಾರಿ, ಆರೋಗ್ಯಾಧಿಕಾರಿಗಳು ಪ್ರತಿ ದಿನ ಖುದ್ದಾಗಿ ಡೆಂಗ್ಯೂ ರೋಗ ನಿಯಂತ್ರಣದ ಬಗ್ಗೆ ಉಸ್ತುವಾರಿ ಹಾಗೂ ಮೇಲ್ವಿಚಾರಣೆಯನ್ನು ನಡೆಸುತ್ತಿದ್ದಾರೆ.

2. ಡೆಂಗಿ ಜ್ವರದಿಂದ ಉಂಟಾಗಿದೆ ಎಂದು ವರದಿಯಾಗುವ ಪ್ರತಿ ಮರಣ ಪ್ರಕರಣಗಳ ತನಿಖೆಗಾಗಿ "ಡೆಂಗ್ಯೂ ಡೆತ್ ಆಡಿಟ್ ಟೀಮ್" ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಯಲ್ಲಿ ಇಂದಿರಾ ಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆಯಿಂದ ಮಕ್ಕಳ ತಜ್ಞರನ್ನು ಹಾಗೂ ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯದಲ್ಲಿನ ಒಬ್ಬರು ತಜ್ಞರು, ಪಾಲಿಕೆಯ ಮುಖ್ಯ ಆರೋಗ್ಯಾಧಿಕಾರಿ ಮತ್ತು ಯೋಜನಾ ಸಮನ್ವಯಾಧಿಕಾರಿ (ಎನ್.ವಿ.ಬಿ.ಡಿ.ಸಿ.ಪಿ), ಆರೋಗ್ಯ ವೈದ್ಯಾಧಿಕಾರಿ (ಸೊಳ್ಳೆ ನಿಯಂತ್ರಣ), ಆರೋಗ್ಯ ವೈದ್ಯಾಧಿಕಾರಿ (ತಾ.ಮ.ಕು.ಕ), ಹಾಗು ಪಾಲಿಕೆಯ ತಜ್ಞ ವೈದ್ಯರನ್ನು ನೇಮಿಸಲಾಗಿದೆ.

3. ಡೆಂಗ್ಯೂ ನಿಯಂತ್ರಣ ಕಾರ್ಯಕ್ರಮದ ಬಗ್ಗೆ ಪಾಲಿಕೆಯ ಸಮುದಾಯದ ಜನರಿಗೆ ಜಾಗೃತಿ ಐ.ಇ.ಸಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ.

   ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತರ ಅಧ್ಯಕ್ಷತೆಯಲ್ಲಿ ಪ್ರತಿ ತಿಂಗಳು (ರೋಗ ಉಲ್ಬಣಾವಸ್ಥೆಯ ಅವಧಿಯಲ್ಲಿ ಪ್ರತಿವಾರ) ಬಿಬಿಎಂಪಿ ಸೊಳ್ಳೆ ನಿಯಂತ್ರಣ ಅಧಿಕಾರಿಗಳು ಹಾಗೂ ಆರೋಗ್ಯಾಧಿಕಾರಿಗಳ ಸಭೆ ಸೇರಿ, ನಿಯಂತ್ರಣ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಿ, ಸೂಕ್ತ ಸಲಹೆ ಸೂಚನೆಗಳನ್ನು ನೀಡಲಾಗುತ್ತಿದೆ.

ಬಿಬಿಎಂಪಿ ವ್ಯಾಪ್ತಿಯ ಆಸ್ಪತ್ರೆಗಳಲ್ಲಿ ಸಂಗ್ರಹವಾಗುವ ರಕ್ತದ ಮಾದರಿಗಳನ್ನು ಉಚಿತವಾಗಿ ಪರೀಕ್ಷಿಸಲು ಪಿ.ಹೆಚ್.ಐ ಹಾಗೂ ರಾಷ್ಟ್ರೀಯ ವೈರಾಣು ಸಂಸ್ಥೆಗಳಲ್ಲಿ ವ್ಯವಸ್ಥೆ ಮಾಡಲಾಗಿದೆ. ಡೆಂಗಿ ಜ್ವರ ರೋಗ ನಿರ್ವಹಣೆ ಹಾಗೂ ಚಿಕಿತ್ಸೆಯನ್ನು ಎಲ್ಲಾ ಬಿಬಿಎಂಪಿ ಆಸ್ಪತ್ರೆಗಳಲ್ಲಿ ಮತ್ತು ವಿಕ್ಟೋರಿಯ ಮತ್ತು ಬೌರಿಂಗ್ ಆಸ್ಪತ್ರೆಗಳಲ್ಲಿ ಉಚಿತವಾಗಿ ಒದಗಿಸಲು ಕ್ರಮಕೈಗೊಳ್ಳಲಾಗಿದೆ.

ರಾಜ್ಯದ ಇತರೆಡೆಗಳಲ್ಲಿ:–

- ಮಾಹೆವಾರು ಕೈಗೊಳ್ಳಬೇಕಾದ ಚಟುವಟಿಕೆಗಳ ಕ್ರಿಯಾ ಯೋಜನೆಯನ್ನು ತಯಾರಿಸಿ ಎಲ್ಲಾ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳಿಗೆ ಕಳುಹಿಸಿ ಜಿಲ್ಲಾ ಮಟ್ಟದಿಂದ ಗ್ರಾಮ ಮಟ್ಟದವರೆಗೆ ಎಲ್ಲಾ ಹಂತದಲ್ಲಿಯೂ ಈ ಕ್ರಿಯಾ ಯೋಜನೆಯನ್ನು ಜನವರಿ 2014 ರಿಂದಲೇ ಅನುಷ್ಠಾನಗೊಳಿಸಲಾಗುತ್ತಿದೆ.

- ಡೆಂಗಿ ನಿಯಂತ್ರಣಕ್ಕಾಗಿ ಕೈಗೊಳ್ಳಬೇಕಾದ ನಿಯಂತ್ರಣ ಕ್ರಮಗಳ ಬಗ್ಗೆ ಮಾರ್ಗದರ್ಶಿ ಸುತ್ತೋಲೆಗಳನ್ನು ಜನವರಿ 2014 ರಿಂದ ಎಲ್ಲಾ ಜಿಲ್ಲೆಗಳಿಗೆ ಕಳುಹಿಸಲಾಗಿದ್ದು, ಅವುಗಳನ್ನು ಅನುಷ್ಠಾನಗೊಳಿಸುವುದೇ ಅಲ್ಲದೇ ಮೇಲ್ವಿಚಾರಣೆಯನ್ನು ಸಹ ನಡೆಸಲಾಗುತ್ತಿದೆ.

- ಎಲ್ಲಾ ಜಿಲ್ಲಾಧಿಕಾರಿಗಳಿಗೆ ಡೆಂಗಿ ಜ್ವರ ರೋಗವನ್ನು ತಡೆಗಟ್ಟಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಕೋರಲಾಗಿದ್ದು, ಪ್ರತಿ ತಿಂಗಳು ಕ್ರಿಯಾಯೋಜನೆ ಅನುಷ್ಠಾನವನ್ನು ಪರಿಶೀಲಿಸಲು ಸಹ ಸೂಚಿಸಲಾಗಿದೆ.

- ಎನ್‌ಆರ್‌ಹೆಚ್‌ಎಂ–ಎನ್‌ವಿಬಿಡಿಸಿಪಿ ಅಡಿಯಲ್ಲಿ ಡೆಂಗಿ ಜ್ವರ ನಿಯಂತ್ರಣಕ್ಕಾಗಿ 2014–15ನೇ ಸಾಲಿನಲ್ಲಿ ಒಟ್ಟು ` 316.93 ಲಕ್ಷದ ಅನುದಾನದ ಬೇಡಿಕೆಯನ್ನು ಸಲ್ಲಿಸಲಾಗಿದ್ದು, ಭಾರತ ಸರ್ಕಾರದ ಅನುಮೋದನೆ ನಿರೀಕ್ಷಿಸಲಾಗಿದೆ. ಎಲ್ಲಾ 30 ಜಿಲ್ಲೆಗಳಿಗೆ

ತಾತ್ಕಾಲಿಕವಾಗಿ ತಕ್ಷಣದ ಕ್ರಮಗಳನ್ನು ಕೈಗೊಳ್ಳಲು ` 88.00 ಲಕ್ಷಗಳ ಅನುದಾನವನ್ನು ಸಧ್ಯಕ್ಕೆ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗಿದೆ.

- ಡೆಂಗಿ ನಿಯಂತ್ರಣದಲ್ಲಿ ಈಡೀಸ್ ಸಮೀಕ್ಷಾ ಮತ್ತು ನಿರ್ಮೂಲನಾ ಕಾರ್ಯವೇ ಪ್ರಧಾನವಾಗಿದ್ದು, ಈ ಚಟುವಟಿಕೆಗಳನ್ನು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಆಶಾ ಕಾರ್ಯಕರ್ತರು, ಆಂಗನವಾಡಿ ಕಾರ್ಯಕರ್ತೆಯರು, ಸ್ಥಳೀಯ ಸ್ವಯಂ ಸೇವಾ ಸಂಸ್ಥೆಗಳ ನೆರವಿನೊಂದಿಗೆ ನಡೆಸಲಾಗುತ್ತಿದೆ.

- ಡೆಂಗಿ ಜ್ವರದ ಪತ್ತೆಗಾಗಿ, ರಾಜ್ಯದಲ್ಲಿ ಈಗಾಗಲೇ 29 ಸೆಂಟಿನಲ್ ಪ್ರಯೋಗಾಲಯಗಳು ಕಾರ್ಯನಿರ್ವಹಿಸುತ್ತಿದ್ದು, 2014–15ನೇ ಸಾಲಿನಲ್ಲಿ ಇನ್ನೂ 3 ಹೊಸ ಪ್ರಯೋಗಾಲಯಗಳನ್ನು ಚಿಕ್ಕಬಳ್ಳಾಪುರ, ರಾಮನಗರ ಮತ್ತು ಯಾದಗಿರ್ ಜಿಲ್ಲೆಗಳಲ್ಲೂ ಸಹ ತೆರೆಯಲು ಕ್ರಮ ಕೈಗೊಳ್ಳಲಾಗಿದೆ. ಮೇಲ್ಕಂಡ ಸೆಂಟಿನಲ್ ಪ್ರಯೋಗಾಲಯಗಳಿಗೆ ಡೆಂಗಿ ಪರೀಕ್ಷಾ ಟೆಸ್ಟ್ ಕಿಟ್ಟ್‌ಗಳನ್ನು ಸರಬರಾಜು ಮಾಡಲಾಗಿರುತ್ತದೆ. ಈ ಪ್ರಯೋಗಾಲಯಗಳಲ್ಲಿ ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳಿಂದ ಬರುವ ರಕ್ತದ ಮಾದರಿಗಳನ್ನು ಉಚಿತವಾಗಿ ಪರೀಕ್ಷಿಸಲು ಕ್ರಮಕೈಗೊಳ್ಳಲಾಗಿದೆ.

- ದಿನಾಂಕ:13–05–2014 ರಂದು ರಾಜ್ಯ ಮಟ್ಟದಲ್ಲಿ ಎಲ್ಲಾ ಜಿಲ್ಲಾ ಕಾರ್ಯಕ್ರಮಾಧಿಕಾರಿಗಳನ್ನು ಹಾಗೂ ಕೀಟಶಾಸ್ತ್ರಜ್ಞರನ್ನು ಒಳಗೊಂಡಂತೆ ಪರಿಶೀಲನಾ ಸಭೆಯನ್ನು ನಡೆಸಿದ್ದು ಡೆಂಗಿ ಜ್ವರ ನಿಯಂತ್ರಣಕ್ಕಾಗಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳನ್ನು ಹಾಗೂ ಇತರ ಸಲಹೆ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ನಿರ್ದೇಶಿಸಲಾಗಿದೆ.

- ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ಲಾರ್ವಾಹಾರಿ ಕೀಟನಾಶಕ (ಟೆಮಿಫಾಸ್ ದ್ರಾವಣ)ವನ್ನು ಸರಬರಾಜು ಮಾಡಿದ್ದು

ರಾಜ್ಯ ಮಟ್ಟದಲ್ಲಿಯೂ ಸಹ ಸುಮಾರು 3500 ಲೀಟರ್ ನಷ್ಟು ದ್ರಾವಣವನ್ನು ತುರ್ತು ಸ್ಥಿತಿಗಾಗಿ ಕಾದಿರಿಸಲಾಗಿದೆ.

- ಡೆಂಗಿ ಜ್ವರ ರೋಗ ನಿರ್ವಹಣೆ ಮತ್ತು ರೋಗಲಕ್ಷಣ ಚಿಕಿತ್ಸೆಗಾಗಿ ಬೇಕಾದ ಜೀವರಕ್ಷಕ ಔಷಧಿಗಳ ದಾಸ್ತಾನು ಇರಿಸಲು ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

- ಶಾಲೆಗಳಲ್ಲಿ ಹಾಜರಾತಿ ಆಂಧೋಲನಾ ನಡೆಯುವ ಸಮಯದಲ್ಲಿ ಡೆಂಗ್ಯೂ ಜ್ವರ ನಿಯಂತ್ರಣ ವಿಷಯವನ್ನು ವಿಶೇಷವಾಗಿ ಪ್ರಸ್ತಾಪಿಸಿ, ಉಪಾಧ್ಯಾಯರ ಮೂಲಕ ವಿದ್ಯಾರ್ಥಿಗಳಲ್ಲಿ ಹಾಗು ಸಮುದಾಯದಲ್ಲಿ ಈ ಬಗ್ಗೆ ಅರಿವು ಮೂಡಿಸಲು ಕೋರಿ ಸಾರ್ವಜನಿಕ ಶಿಕ್ಷಣ ಆಯುಕ್ತರಿಗೆ ಅರೆ ಸರ್ಕಾರಿ ಪತ್ರವನ್ನು ಬರೆಯಲಾಗಿದೆ.

ಕಳೆದ ವರ್ಷಕ್ಕೆ ಹೋಲಿಸಿದಾಗ ಮೇ ಅಂತ್ಯದವರೆಗೆ ಶೇಕಡ 50 ರಷ್ಟು ಡೆಂಗಿ ಜ್ವರ ಪ್ರಕರಣಗಳು ಇಳಿಮುಖವಾಗಿರುವುದೇ ಅಲ್ಲದೇ ಇಲ್ಲಿಯವರೆಗೆ ರಾಜ್ಯದಲ್ಲಿ ಯಾವುದೇ ಡೆಂಗಿ ಜ್ವರ ಮರಣ ಪ್ರಕರಣಗಳು ವರದಿಯಾಗಿರುವುದಿಲ್ಲ.

ಬೆಂಗಳೂರು ನಗರದಲ್ಲಿ ಅಕ್ರಮ ಬಿ.ಪಿ.ಎಲ್. ಕಾರ್ಡ್ ಹೊಂದಿರುವವರು

188(157)

ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ್)

ಅ) ಬೆಂಗಳೂರು ನಗರದಲ್ಲಿ ಬಿಪಿಎಲ್ ಪಡಿತರ ಚೀಟಿ ಹೊಂದಿರುವ ಕುಟುಂಬಗಳೆಷ್ಟು;